ವಿಜಯವಾಣಿ
ಕನ್ನಡಿಗರ ಧ್ವನಿ

# ಜ್ಞಾನ ವಿಷಯದಲ್ಲಿ ಲಿಂಗಭೇದ ಬೇಡ



ಜೈನ್ ವಿವಿ ಸಂಶೋಧನಾ ಸಮ್ಮೇಳನದಲ್ಲಿ ಕಿರಣ್ ಮಜುಮ್ದಾರ್ ಷಾ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರ ವಿತರಿಸಿದರು.

ಬೆಂಗಳೂರು: ಜ್ಞಾನದ ವಿಷಯದಲ್ಲಿ ಲಿಂಗಭೇದ ಮಾಡುವುದು ಸರಿಯಲ್ಲ ಎಂದು ಬಯೋಕಾನ್ ಸಂಸ್ಥಾಪಕಿ ಕಿರಣ್ ಮಜುಮ್ದಾರ್ ಷಾ ಅಭಿಪ್ರಾಯಪಟ್ಟಿದ್ದಾರೆ. ಜೈನ್ ವಿಶ್ವವಿದ್ಯಾಲಯ ಆಯೋಜಿಸಿದ್ದ 3ನೇ ವಾರ್ಷಿಕ ಸಂಶೋಧನಾ ಸಮ್ಮೇಳನದಲ್ಲಿ ಮಾತನಾಡಿ, ವಿಜ್ಞಾನ ಮತ್ತು ತಂತ್ರಜ್ಞಾನದಲ್ಲಿ ಮಹಿಳೆ-ಪುರುಷ ಎಂಬ ತಾರತಮ್ಯ ಮಾಡಬಾರದು. ನಮ್ಮ ಕಂಪನಿಯ ಸಂಶೋಧನಾ ಮತ್ತು ಅಭಿವೃದ್ಧಿ ವಿಭಾಗದಲ್ಲಿ ಶೇ.40 ಮಹಿಳೆಯರು ಕೆಲಸ ಮಾಡುತ್ತಿದ್ದಾರೆ ಎಂದು ತಿಳಿಸಿದರು. ಸಮ್ಮೇಳನದ ಉದ್ಘಾಟಿಸಿದ ಜೈನ್ ವಿವಿ ಕುಲಪತಿ ಡಾ.ಎನ್. ಸುಂದರರಾಜನ್ ಮಾತನಾಡಿ, ಈ ಸಂಶೋಧನಾ ಸಮ್ಮೇಳನ ಆಯೋಜಿಸುವ ಉದ್ದೇಶ ಎಲ್ಲ ಸಂಶೋಧನಾಗಾರರನ್ನು ಒಂದೆಡೆ ಸೇರಿಸಿ ಅವರ ಸಂಶೋಧನಾ ಅನುಭವಗಳನ್ನು ಹಂಚಿಕೊಳ್ಳಲು ವೇದಿಕೆ ಕಲ್ಪಿಸಿಕೊಡುವುದಾಗಿದೆ. ಸಂಶೋಧನೆಯಲ್ಲಿ ಆಧುನಿಕ ತಾಂತ್ರಿಕತೆಗಳನ್ನು ಅಳವಡಿಸಿಕೊಳ್ಳುವ ಬಗ್ಗೆ ವಿದ್ಯಾರ್ಥಿಗಳು ತಿಳಿದುಕೊಳ್ಳಬೇಕು ಎಂದರು. 262 ಸಂಶೋಧನಾ ವಿದ್ಯಾರ್ಥಿಗಳು ಈ ಸಮ್ಮೇಳನದಲ್ಲಿ ಭಾಗವಹಿಸಿದ್ದರು.